ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಬೀದರ್ ಜಿಲ್ಲೆಯಲ್ಲಿ ಇಲಾಖೆಯಿಂದ ವಿವಿಧ ಯೋಜನೆಗಳ ಕುರಿತು

ಶ್ರೀ ಅರವಿಂದ ಕುಮಾರ್ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು) -

413 (560) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2017 ರಿಂದ 2020ನೇ ಸಾಲಿನ ಅವಧಿಯಲ್ಲಿ ಬೀದರ್ ಜಿಲ್ಲೆಯಲ್ಲಿ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಎಷ್ಟು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; ಅವು ಯಾವುವು; ಪ್ರಸ್ತುತ ಯಾವ ಹಂತದಲ್ಲಿವೆ; ಅವುಗಳಿಗೆ ಬಿಡುಗಡೆ ಮಾಡಲಾದ ಅನುದಾನ ಎಷ್ಟು; (ವಿವರ ಒದಗಿಸುವುದು)

(ಆ) 2013 ರಿಂದ 2018ನೇ ಸಾಲಿನ ಅವಧಿಯಲ್ಲಿ ಕ್ರಿಶ್ಚಿಯನ್ ಅಭಿವೃದ್ಧಿ ಮಂಡಳಿಗೆ ಮೀಸಲಿಟ್ಟಿದ್ದ ಅನುದಾನ ಎಷ್ಟು; ಪ್ರಸ್ತುತ ಎಷ್ಟು ಅನುದಾನ ಮೀಸಲಿಡಲಾಗಿದೆ? (ವಿವರ ನೀಡುವುದು)